**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹುಣಸೂರು**

ದಿನಾಂಕಃ 03ನೇ ಜೂನ್ ತಿಂಗಳು 2026 ರಂದು

**ಸಿಸಿ ನಂ.120/2023**

**ಫಿರ್ಯಾದುದಾರರುಃ** ಸಂಜಯ್, ಬಿನ್ ನರಸಯ್ಯ,
30 ವರ್ಷ, ವಾಸಃ ಹಳೇ ಕೆ.ಆರ್.ನಗರ ರಸ್ತೆ,
ವಾರ್ಡ್ ನಂ.4, ಕಲ್ಕುಣಿಕೆ, ಹುಣಸೂರು ನಗರ.

**– ವಿರುದ್ಧ –**

**ಆರೋಪಿಃ** ಸಂಜಯ್.ಬಿ.,ಬಿನ್ ಬಸವಯ್ಯ,
29 ವರ್ಷ, ವಾಸಃ ಕಟ್ಟೆಮಳಲವಾಡಿ ಗ್ರಾಮ ಮತ್ತು ಅಂಚೆ,
ಗಾವಡಗೆರೆ ಹೋಬಳಿ, ಹುಣಸೂರು ತಾಲ್ಲೂಕು,

**ಹಾಲಿ ವಾಸಃ** ಪೊಲೀಸ್ ಪೇದೆ,
ವಿಜಯನಗರ ಪೊಲೀಸ್ ಠಾಣೆ, ಐಶ್ವರ್ಯ ಪೆಟ್ರೋಲ್
ಬಂಕ್ ಹತ್ತಿರ, ಮೈಸೂರು ನಗರ.

**ದಂಡ ಪ್ರಕ್ರಿಯೆ ಸಂಹಿತೆಯ ಕಲಂ.251 ರ ಅಡಿಯಲ್ಲಿ ಆರೋಪಣಾ ಸಾರಾಂಶ**

ಆರೋಪಿಯಾದ ನೀವು ಮತ್ತು ಫಿರ್ಯಾದಿದಾರರಾದ ಸಂಜಯ್ ರವರು ಹಲವಾರು ವರ್ಷಗಳಿಂದ ಸ್ನೇಹಿತರಾಗಿದ್ದು, ಸದರಿ ಸ್ನೇಹ ಪರಿಚಯದ ಆಧಾರದ ಮೇಲೆ ನೀವು ನಿಮ್ಮ ದರದ್ದು ನಿಮಿತ್ತ ಅಂದರೆ ನಿಮ್ಮ ತಂಗಿಯ ವಿವಾಹದ ಖರ್ಚಿಗಾಗಿ ಜರೂರು ಹಣದ ಅವಶ್ಯಕತೆ ಇರುವುದರಿಂದ ದಿನಾಂಕಃ 02.12.2022ರಂದು ರೂ.2,50,000/–ಗಳನ್ನು ಮರುಪಾವತಿಸುವುದಾಗಿ ಹೇಳಿ ಸಾಲವಾಗಿ ಪಡೆದುಕೊಂಡಿದ್ದು, ಸದರಿ ಸಾಲದ ಮರುಪಾವತಿಗಾಗಿ ದಿನಾಂಕಃ 15.01.2023ರಂದು ಪಾವತಿಯಾಗುವಂತೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಮೈಸೂರು ಶಾಖೆಯ ಚೆಕ್ ಸಂಖ್ಯೆಃ 047518 ಅನ್ನು ರೂ.2,50,000/–ಗಳಿಗೆ ಫಿರ್ಯಾದಿದಾರರಿಗೆ ನೀಡಿದ್ದು, ಅದನ್ನು ಅವರು ತಮ್ಮ ಖಾತೆ ಹೊಂದಿದ ಕರ್ನಾಟಕ ಬ್ಯಾಂಕ್, ಹುಣಸೂರು ಶಾಖೆಯ ಮೂಲಕ ನಗದೀಕರಣಕ್ಕಾಗಿ ಸಲ್ಲಿಸಿದ್ದು, ಸದರಿ ಬ್ಯಾಂಕಿನವರು ಸ್ಟೇಟ್‌ಬ್ಯಾಂಕ್ ಆಫ್ ಇಂಡಿಯಾ, ಮೈಸೂರು ಶಾಖೆಗೆ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ "Exceeds Arrangement" ಎಂಬ ಕಾರಣಕ್ಕಾಗಿ ಸದರಿ ಚೆಕ್ ಅಮಾನ್ಯಗೊಂಡು ದಿನಾಂಕಃ 21.01.2023 ರಂದು ಬ್ಯಾಂಕಿನ ಹಿಂಬರಹದೊಂದಿಗೆ

ವಾಪಾಸಾಗಿದ್ದು, ಈ ಬಗ್ಗೆ ಫಿರ್ಯಾದಿದಾರರು ದಿನಾಂಕಃ 25.01.2023 ರಂದು ತಮ್ಮ ವಕೀಲರಿಂದ ನೋಂದಾಯಿತ ಅಂಚೆಯ ಮೂಲಕ ನೋಟೀಸನ್ನು ಕಳುಹಿಸಿದ್ದು, ಸದರಿ ನೋಟೀಸನ್ನು ನೀವು ತೆಗೆದುಕೊಳ್ಳದೇ unclaimed ಎಂಬ ಷರಾದೊಂದಿಗೆ ದಿನಾಂಕಃ 07.02.2023 ರಂದು ವಾಪಸ್ ಬಂದಿದ್ದು, ಈ ಬಗ್ಗೆ ತಿಳುವಳಿಕೆ ಇದ್ದರೂ ಸಹ ನೀವು ಉದ್ದೇಶಪೂರ್ವಕವಾಗಿ ಚೆಕ್‌ನಲ್ಲಿ ನಮೂದಿಸಿದ ಹಣವನ್ನು ನೀಡದೆ ಇರುವುದರಿಂದ ನೀವು ನೆಗೋಷಿಯೇಬಲ್ ಇನ್‌ಸ್ಟ್ರುಮೆಂಟ್ಸ್ ಕಾಯ್ದೆಯ ಕಲಂ.138ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | ತಿಳಿಯಿತು |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | ತಪ್ಪು ಮಾಡಿಲ್ಲ, ವಿಚಾರಣೆಯಾಗಬೇಕು. |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

ANITHA

Digitally signed by ANITHA
Date: 2026.06.03 16:03:12 +0530

Sd/-

(ಅನಿತ)

**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**

**ಮತ್ತು ಪ್ರ.ದ.ನ್ಯಾದಂ., ಹುಣಸೂರು.**

ಆರೋಪಿಯ ಸಹಿಃ